**ಎರಡನೇ ಅಪರ ಸಿವಿಲ್ ನ್ಯಾಯಾಧೀಶರು ಮತ್ತು ಪ್ರ ದ ನ್ಯಾದಂ ನ್ಯಾಯಾಲಯ, ಮದ್ದೂರು.**

**ಸಿಸಿ 478/2024**

| | | | |
|---|---|---|---|
| **ಸಾಕ್ಷಿದಾರರ ಹೆಸರು** | - | ಮಂಜುನಾಥ್ ಕೆ | **ಚಾ.ಸಾ.-9** |
| **ತಂದೆ ಹೆಸರು** | - | ಕರಿಯಣ್ಣ | **ಫ್ರಾ.ಸಾ.-4** |
| **ವಯಸ್ಸು** | - | 42 ವರ್ಷ | |
| **ಉದ್ಯೋಗ** | - | ಪೊಲೀಸ್ ಸಬ್ ಇನ್ಸ್ಪೆಕ್ಟರ್ , ಮದ್ದೂರು ಪೋ ಠಾಣೆ | |
| **ವಾಸ ಸ್ಥಳ** | - | ಮದ್ದೂರು | |

ದಿನಾಂಕಃ 09-12-2025 ರಂದು ಪ್ರಮಾಣ ವಚನ ಬೋಧಿಸಲಾಯಿತು.

**ಮುಖ್ಯ ವಿಚಾರಣೆಃ ಅಭಿಯೋಜನೆಯ ಪರಃ ಎ ಪಿ ಪಿ ರವರಿಂದಃ**

ನಾನು ದಿ 27-10-2023 ರಿಂದ ಇಲ್ಲಿಯವರೆಗೂ ಮದ್ದೂರು ಪೋಲೀಸ್ ಠಾಣೆಯಲ್ಲಿ ಪಿಎಸ್ ಐ ಯಾಗಿ ಕರ್ತವ್ಯ ನಿರ್ವಹಿಸುತ್ತಿದ್ದೇನೆ.

ಸದರಿ ಕಡತವನ್ನು ಚಾಸಾ-8 ರವರಿಂದ ಪಡೆದು ತನಿಖೆ ಮುಂದುವರೆಸಿ, ಆರೋಪಿತರು ಜಿಲ್ಲಾ ಮತ್ತು ಸತ್ರ ನ್ಯಾಯಾಲಯದಿಂದ ನಿರೀಕ್ಷಣಾ ಜಾಮೀನು ಪಡೆದು ಠಾಣೆಗೆ ಹಾಜರಾಗಿದ್ದು ನ್ಯಾಯಾಲಯದ ಆದೇಶದಂತೆ ಆರೋಪಿತರನ್ನು ಜಾಮೀನಿನ ಮುಚ್ಚಳಿಕೆ ಪಡೆದು ಬಿಡುಗಡೆ ಗೊಳಿಸಿರುತ್ತೇನೆ. 20-02-2024 ರಂದು ಕೃತ್ಯ ನಡೆದ ಸ್ಥಳಕ್ಕೆ ಸಂಬಂಧಿಸಿದಂತೆ ತಾಲ್ಲೂಕು ಸರ್ವೆಯರ್ ರಿಂದ ನೋಟಿಸ್ ನೀಡಿದ ಬಗ್ಗೆ ಹಾಗೂ ಸ್ಥಳದಲ್ಲಿ ಮಹಜರ್ ಕ್ರಮ ಜರುಗಿಸಿದ ಬಗ್ಗೆ ದೃಢೀಕೃತ ನಕಲನ್ನು ಪಡೆದುಕೊಂಡಿರುತ್ತೇನೆ. ಕೃತ್ಯ ನಡೆದ ಸ್ಥಳದ ಆರ್ ಟಿ ಸಿ ಪಡೆದುಕೊಂಡಿರುತ್ತೇನೆ. ಸದರಿ ದಾಖಲೆಗಳು ಜೆರಾಕ್ಸ ಪ್ರತಿಯಾಗಿರುವುದರಿಂದ ಗುರುತಿಸಿರುವುದಿಲ್ಲ. ಚಾಸಾ-3 ರವರ ಹೇಳಿಕೆ ಪಡೆದುಕೊಂಡಿರುತ್ತೇನೆ. ದಿಃ 20-02-2024 ರಂದು ತನಿಖೆ ಮುಕ್ತಾಯ ಗೊಂಡಿದ್ದು ಆರೋಪಿತರ ವಿರುದ್ಧ ಆರೋಪ ಸಾಬೀತಾದ ಕಾರಣ ಅವರ ವಿರುದ್ಧ ದೋಷಾರೋಪಣೆ ಪಟ್ಟಿಯನ್ನು ನ್ಯಾಯಾಲಯಕ್ಕೆ ಸಲ್ಲಿಸಿರುತ್ತೇನೆ.

**ಪಾಟೀ ಸವಾಲು ಆರೋಪಿತರ ಪರ ಶ್ರೀ ಎಂ ಎಂ ಎಂ ವಕೀಲರಿಂದಃ-**

ಆರೋಪಿಗಳ ವಿರುದ್ದ ಯಾವುದೇ ದೋಷಾರೋಪಣೆ ರುಜುವಾಗದೇ ಇದ್ದರೂ ಕೂಡ ಅವರಿಗೆ ಸಹಾಯ ಮಾಡುವ ಉದ್ದೇಶದಿಂದ ಅವರ ವಿರುದ್ದ ಸುಳ್ಳು ದೋಷಾರೋಪಣೆ ಪಟ್ಟಿಯನ್ನು ಸಲ್ಲಿಸಿ ಸುಳ್ಳು ಸಾಕ್ಷಿ ನುಡಿಯುತ್ತಿದ್ದೀರಿ ಎಂದರೆ ಸರಿಯಲ್ಲ.  ಠಾಣಾ ಅಂಕಿಅಂಶಗಳಿಗೊಸ್ಕಾರ ಸುಳ್ಳು ಪ್ರಕರಣ ಸಲ್ಲಿಸಿ ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೀರೀ ಎಂದರೆ ಸರಿಯಲ್ಲ.

**ಮರು ವಿಚಾರಣೆ ಇಲ್ಲ.**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಲಾಗಿದೆ )

ಓ ಹೇ ಕೇ ಸರಿಯಾಗಿದೆಯೆಂದು ಒಪ್ಪಿರುತ್ತಾರೆ.

2 ನೇ ಅಪರ ಸಿವಿಲ್  ನ್ಯಾಯಾಧೀಶರು

ಸಾಕ್ಷಿ ಸಹಿ

ಮತ್ತು ಜೆ ಎಂ ಎಫ್ ಸಿ , ಮದ್ದೂರು.